**<u>ದಿನಾಂಕ 24-03-2026 ರಂದು ಸಾಕ್ಷಿಯನ್ನು ಕರೆಯಿಸಿ ಮುಖ್ಯ ವಿಚಾರಣೆಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಶ್ರೀ.ಎಸ್.ಆರ್.ಬಿ ವಾದಿ ಪರ ವಕೀಲರಿಂದಃಃ</u>**

ನಾನು ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರವನ್ನು ಹಾಜರು ಮಾಡಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳನ್ನು ನಾನೇ ಹೇಳಿ ಬರೆಯಿಸಿ ತಿಳಿದುಕೊಂಡಿರುತ್ತೇನೆ ಹಾಗೂ ಈ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ ಎಂದು ಪ್ರಮಾಣ ಮಾಡಿ ಸಹಿ ಮಾಡಿರುತ್ತೇನೆ.

ನಾನು ಈಗಾಗಲೇ ದಾಖಲಾತಿಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದು, ಅವುಗಳನ್ನು ನಾನು ನೋಡಿ ಗುರುತಿಸಿದ್ದು , ನಂತರ ಈ ಕೆಳಕಂಡಂತೆ ದಾಖಲಾತಿಗಳನ್ನು ಗುರುತಿಸಲಾಯಿತು.

1. ಸಾಕ್ಷಿಯು 12 ಪಹಣಿ ಪತ್ರಿಕೆಗಳನ್ನು ನೋಡಿ ಗುರುತಿಸಿದ್ದು , ಅವುಗಳನ್ನು ನಿಪಿ-1 ರಿಂದ ನಿಪಿ-12 ಎಂದು ಗುರುತಿಸಲಾಯಿತು.
2. ಸಾಕ್ಷಿಯು 2016-17 ರ ಡಿಮ್ಯಾಂಡ್ ರಿಜಿಸ್ಟರ್ ನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-13 ಎಂದು ಗುರುತಿಸಲಾಯಿತು.
3. ಸಾಕ್ಷಿಯು ಅಸಲು ದಾವಾ ಸಂಖ್ಯೆ 4/2003 ರ ಆದೇಶ ಪ್ರತಿ, ತಿದ್ದು ವಾದಪತ್ರ, ರಾಜಿ ಅರ್ಜಿ ಮತ್ತು ಡಿಕ್ರಿಯನ್ನು , ಎರಡು ಶೆಡ್ಯೂಲ್ ಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-14 ರಿಂದ ನಿಪಿ-19 ಎಂದು ಗುರುತಿಸಲಾಯಿತು.

ಆದ್ದರಿಂದ ದಾವೆಯನ್ನು ಪುರಸ್ಕರಿಸಬೇಕೆಂದು ಕೋರಿರುತ್ತಾರೆ.

**<u>ಪಾಟೀ ಸವಾಲುಃ 1 ಮತ್ತು 8 ನೇ ಪ್ರತಿವಾದಿಗಳ ಪರ ವಕೀಲರು ಪಾಟೀಸವಾಲಿಗೆ ಸಮಯ ಕೋರಿದ್ದು ಸಮಯಾವಕಾಶ ನೀಡಲಾಯಿತು.</u>**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು).**

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.